# All India Radio: Bangalore
# National Bulletin In Kannada
# 16.11.2025  19.35 p.m.

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**16.11.2025  19.35 p.m.**

**<><><><>**

ಮುಖ್ಯಾಂಶಗಳು

1. ನೂತನ ಸರ್ಕಾರ ರಚನೆಗೆ ಬಿಹಾರದಲ್ಲಿ ಬಿರುಸಿನ ರಾಜಕೀಯ ಚಟುವಟಿಕೆ ; ಹಿರಿಯ ಎನ್‌ಡಿಎ ನಾಯಕರಿಂದ ಮುಖ್ಯಮಂತ್ರಿ ಭೇಟಿ
2. ಧ್ವನಿ ಇಲ್ಲದವರಿಗೆ ಧ್ವನಿ ನೀಡುವಲ್ಲಿ ಪತ್ರಿಕೋದ್ಯಮ ಸಹಕಾರಿ - ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್
3. ಪಶ್ಚಿಮ ಏಷ್ಯಾ ಬೆಳವಣಿಗೆಗಳ ಕುರಿತು ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್, ಕತಾರ್ ಪ್ರಧಾನಿಯವರೊಂದಿಗೆ ಸಮಾಲೋಚನೆ
4. ವಿಶ್ವ ಬಾಕ್ಸಿಂಗ್ ಕಪ್ ಫೈನಲ್ ; ಸೆಮಿಫೈನಲ್ ಪ್ರವೇಶಿಸಿದ ೪ ಭಾರತೀಯ ಬಾಕ್ಸರ್‌ಗಳು
5. ಅಂಧರ ಮಹಿಳಾ ಟಿ-೨೦ ವಿಶ್ವಕಪ್ ಕ್ರಿಕೆಟ್ ; ಪಾಕಿಸ್ತಾನದ ವಿರುದ್ಧ ಭಾರತಕ್ಕೆ ೮ ವಿಕೆಟ್ ಜಯ

<><><><>

ಬಿಹಾರದಲ್ಲಿ ಎನ್‌ಡಿಎ ನೇತೃತ್ವದ ನೂತನ ಸರ್ಕಾರದ ರಚನೆಗೆ ಸಂಬಂಧಿಸಿದ ರಾಜಕೀಯ ಚಟುವಟಿಕೆಗಳು ತೀವ್ರಗೊಂಡಿವೆ. ಪಾಟ್ನಾದಲ್ಲಿರುವ ಮುಖ್ಯಮಂತ್ರಿ ನಿತೀಶ್‌ಕುಮಾರ್ ಅವರ ನಿವಾಸ ರಾಜಕೀಯ ಚಟುವಟಿಕೆಯ ಪ್ರಮುಖ ಕೇಂದ್ರವಾಗಿದ್ದು, ವಿವಿಧ ಪಕ್ಷಗಳೊಂದಿಗೆ ಹಲವು ಸುತ್ತಿನ ಸಭೆಗಳು ನಡೆದಿವೆ. ಹಲವು ಹಿರಿಯ ಎನ್‌ಡಿಎ ನಾಯಕರು ಮುಖ್ಯಮಂತ್ರಿಯನ್ನು ಭೇಟಿಯಾಗಿ ಮುಂದಿನ ಸರ್ಕಾರ

ರಚಿಸುವ ಕುರಿತು ಚರ್ಚೆ ನಡೆಸಿದ್ದಾರೆ. ಹಿರಿಯ ಬಿಜೆಪಿ ನಾಯಕ ಹಾಗೂ ಕೇಂದ್ರ ಗೃಹ ಖಾತೆ ರಾಜ್ಯ ಸಚಿವ ನಿತ್ಯಾನಂದ ರೈ, ಉಪಮುಖ್ಯಮಂತ್ರಿ ವಿಜಯ್‌ಕುಮಾರ್ ಸಿನ್ಹಾ ಮತ್ತು ರಾಷ್ಟ್ರೀಯ ಲೋಕ ಮೋರ್ಚ-ಆರ್‌ಎಲ್‌ಎಂ ಅಧ್ಯಕ್ಷ ಉಪೇಂದ್ರ ಕುಶ್ವಾಹ ಇಂದು ನಿತೇಶ್‌ಕುಮಾರ್ ಅವರನ್ನು ಭೇಟಿ ಮಾಡಿದರು. ರಾಜ್ಯದಲ್ಲಿಂದು ಎನ್‌ಡಿಎ ಮಿತ್ರಪಕ್ಷಗಳ ಶಾಸಕಾಂಗ ಪಕ್ಷಗಳ ಸಭೆ ನಡೆಯುತ್ತಿದೆ. ಹಿರಿಯ ನಾಯಕ ಪ್ರಫುಲ್‌ಕುಮಾರ್ ಮಾಂಝಿ ಅವರನ್ನು ಹಿಂದೂಸ್ಥಾನಿ ಅವಾಮ್ ಮೋರ್ಚಾ ಜಾತ್ಯಾತೀತ ಪಕ್ಷದ ಶಾಸಕಾಂಗ ಪಕ್ಷದ ನಾಯಕರಾಗಿ ಆಯ್ಕೆ ಮಾಡಲಾಗಿದೆ. ಬಿಜೆಪಿಯ ಶಾಸಕಾಂಗ ಪಕ್ಷದ ಸಭೆ ನಾಳೆ ನಡೆಯುವ ನಿರೀಕ್ಷೆಯಿದೆ. ಚುನಾಯಿತ ಎನ್‌ಡಿಎ ಪಕ್ಷಗಳು ತಮ್ಮ ಶಾಸಕಾಂಗ್ ಪಕ್ಷದ ನಾಯಕರನ್ನು ಪ್ರತ್ಯೇಕ ಸಭೆಗಳಲ್ಲಿ ಆಯ್ಕೆ ಮಾಡಿದ ನಂತರ ಎನ್‌ಡಿಎ ಶಾಸಕಾಂಗ ಪಕ್ಷದ ನಾಯಕನನ್ನು ಆಯ್ಕೆ ಮಾಡಲು ಹೊಸದಾಗಿ ಆಯ್ಕೆಯಾದ ಎಲ್ಲ ೨೦೨ ಶಾಸಕರ ಜಂಟಿ ಸಭೆಯನ್ನು ನಡೆಸಲಾಗುವುದು. ನಂತರ ಸರ್ಕಾರ ರಚಿಸುವ ಹಕ್ಕು ಮತ್ತು ಶಾಸಕ ಬೆಂಬಲ ಪತ್ರವನ್ನು ರಾಜ್ಯಪಾಲರಿಗೆ ಸಲ್ಲಿಸಲಾಗುತ್ತದೆ. ನಾಳೆ ಮುಖ್ಯಮಂತ್ರಿ ನಿತೇಶ್‌ಕುಮಾರ್ ಅವರ ಅಧ್ಯಕ್ಷತೆಯಲ್ಲಿ ಪ್ರಸ್ತುತ ಸರ್ಕಾರದ ಸಚಿವ ಸಂಪುಟದ ಕೊನೆಯ ಸಭೆ ನಡೆಯಲಿದೆ.

<><><><>

ಯುವಜನರಲ್ಲಿ ಆಶಾವಾದವನ್ನು ಪ್ರೇರೇಪಿಸಲು ದೇಶದ ಸಕಾರಾತ್ಮಕ ಬೆಳವಣಿಗೆಗಳನ್ನು ಎತ್ತಿ ತೋರಿಸುವಲ್ಲಿ ಮಾಧ್ಯಮಗಳು ಪ್ರಮುಖ ಪಾತ್ರ ವಹಿಸುತ್ತವೆ ಎಂದು ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಹೇಳಿದ್ದಾರೆ. ನವದೆಹಲಿಯಲ್ಲಿಂದು ಮನೋರಮಾ ನ್ಯೂಸ್ ಮೇಕರ್ ಪ್ರಶಸ್ತಿಗಳು-೨೦೨೪ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಪತ್ರಿಕೋದ್ಯಮ ಧ್ವನಿ ಇಲ್ಲದವರಿಗೆ ಧ್ವನಿ ನೀಡಲು ಸಹಾಯ

ಮಾಡುತ್ತದೆ. ಜಾಗೃತಿ ಮತ್ತು ಜವಾಬ್ದಾರಿಯುತ ಸಾರ್ವಜನಿಕ ಸಂವಾದವನ್ನು ರೂಪಿಸುವ ಮೂಲಕ ಮಾದಕ ದ್ರವ್ಯ ಮುಕ್ತ ಸಮಾಜ ಸೃಷ್ಟಿಸುವಲ್ಲಿ ಮಾಧ್ಯಮಗಳು ನಿರ್ಣಾಯಕ ಪಾತ್ರ ವಹಿಸುತ್ತವೆ ಎಂದರು. ಸಮಾರಂಭದಲ್ಲಿ ಉಪರಾಷ್ಟ್ರಪತಿ, ಕೇಂದ್ರ ಪ್ರವಾಸೋಧ್ಯಮ ಮತ್ತು ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಖಾತೆ ರಾಜ್ಯ ಸಚಿವ ಸುರೇಶ್ ಗೋಪಿ ಅವರಿಗೆ ಮನೋರಮಾ ನ್ಯೂಸ್ ಮೇಕರ್ ಪ್ರಶಸ್ತಿಯನ್ನು ಪ್ರದಾನ ಮಾಡಿದರು.

<><><><>

ಪ್ರಜಾಪ್ರಭುತ್ವದಲ್ಲಿ ಪತ್ರಿಕಾ ಮಾಧ್ಯಮ ಪ್ರಮುಖ ಪಾತ್ರ ವಹಿಸುತ್ತದೆ ಎಂದು ಕೇಂದ್ರ ಮಾಹಿತಿ ಮತ್ತು ಪ್ರಸಾರ ಸಚಿವ ಅಶ್ವಿನಿ ವೈಷ್ಣವ್ ಹೇಳಿದ್ದಾರೆ. ನವದೆಹಲಿಯಲ್ಲಿಂದು ನಡೆದ ರಾಷ್ಟ್ರೀಯ ಪತ್ರಿಕಾ ದಿನಾಚರಣೆ-೨೦೨೫ರ ಆಚರಣೆಯಲ್ಲಿ ಪಾಲ್ಗೊಂಡು ನಂತರ ಮಧ್ಯಮಗಳೊಂದಿಗೆ ಮಾತನಾಡಿದ ಅವರು, ಈ ದಿನದ ಸಂದರ್ಭದಲ್ಲಿ ತಪ್ಪು ಮಾಹಿತಿಯನ್ನು ಹೇಗೆ ಎದುರಿಸಬಹುದು ಮತ್ತು ಪತ್ರಿಕಾ ವಿಶ್ವಾಸರ್ಹತೆಯನ್ನು ಹೇಗೆ ಬಲಪಡಿಸಬಹುದು ಎಂಬುದರ ಕುರಿತು ಉಪನ್ಯಾಸ ಆಯೋಜಿಸಲಾಗಿದೆ ಎಂದರು. ಇದೇ ವೇಳೆ ಪತ್ರಿಕಾ ಮತ್ತು ಮಾಧ್ಯಮ ಕ್ಷೇತ್ರದ ಎಲ್ಲರಿಗೂ ಈ ದಿನದ ಶುಭಾಶಯ ಕೋರಿದರು.

**ಧ್ವನಿ : ಅಶ್ವಿನಿ ವೈಷ್ಣವ್ (೨೬ ಸೆಕೆಂಡ್‌ಗಳು)**

ಕಾರ್ಯಕ್ರಮದಲ್ಲಿ ಮಾಹಿತಿ ಮತ್ತು ಪ್ರಸಾರ ಖಾತೆ ರಾಜ್ಯ ಸಚಿವ ಡಾ. ಎಲ್. ಮುರುಗನ್, ಮಾಹಿತಿ ಮತ್ತು ಪ್ರಸಾರ ಕಾರ್ಯದರ್ಶಿ ಸಂಜಯ್ ಜಾಜು ಮತ್ತು ಭಾರತೀಯ ಪತ್ರಿಕಾ ಮಂಡಳಿ-ಪಿಸಿಐಯ ಅಧ್ಯಕ್ಷೆ, ನ್ಯಾಯಮೂರ್ತಿಗಳಾದ ರಂಜನಾ ಪ್ರಕಾಶ್ ದೇಸಾಯಿ ಪಾಲ್ಗೊಂಡಿದ್ದರು. ಇದಕ್ಕೂ ಮುನ್ನ ಕಾರ್ಯಕ್ರಮದಲ್ಲಿ ಮಾತನಾಡಿದ ಪಿಸಿಐ ಅಧ್ಯಕ್ಷೆ ರಂಜನಾ ದೇಸಾಯಿ, ಇದೇ ದಿನದಂದು ಭಾರತೀಯ

ಪತ್ರಿಕಾ ಮಂಡಳಿ, ಪತ್ರಿಕಾ ಮಾಧ್ಯಮದ ನೈತಿಕ ಕಾವಲುಗಾರನಾಗಿ ಕಾರ್ಯನಿರ್ವಹಿಸಲು ಆರಂಭಿಸಿತು ಎಂದು ಸ್ಮರಿಸಿದರು. ಈ ಸಂಸ್ಥೆಗೆ ಪತ್ರಿಕಾ ಸ್ವಾತಂತ್ರ್ಯವನ್ನು ಕಾಪಾಡುವ ಮತ್ತು ದೇಶದಲ್ಲಿ ಪತ್ರಿಕೋದ್ಯಮದ ಗುಣಮಟ್ಟವನ್ನು ಸುಧಾರಿಸುವ ಜವಾಬ್ದಾರಿ ವಹಿಸಲಾಗಿದೆ ಎಂದು ಹೇಳಿದರು. ಪತ್ರಿಕೋದ್ಯಮ ಕೇವಲ ವೃತ್ತಿಯಾಗದೇ ಸತ್ಯದ ಅನ್ವೇಷಣೆ ಮತ್ತು ಧೈರ್ಯದ ಅಗತ್ಯವಿರುವ ಕ್ಷೇತ್ರವಾಗಿದೆ ಎಂದು ಅವರು ಬಣ್ಣಿಸಿದರು.

<><><><>

ಸಾರ್ವಜನಿಕ ಹಣಕಾಸು ಕ್ಷೇತ್ರದಲ್ಲಿ ಹೊಣೆಗಾರಿಕೆ ಮತ್ತು ಪಾರದರ್ಶಕತೆಯ ಅತ್ಯುನ್ನತ ಮಾನದಂಡಗಳನ್ನು ಎತ್ತಿ ಹಿಡಿಯುವುದನ್ನು ಭಾರತೀಯ ಕಾಂಪ್ಟ್ರೋಲರ್ ಅಂಡ್ ಆಡಿಟರ್ ಜನರಲ್-ಸಿಎಜಿ ಮುಂದುವರಿಸಿದೆ ಎಂದು ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಹೇಳಿದ್ದಾರೆ. ನವದೆಹಲಿಯಲ್ಲಿಂದು ನಡೆದ ೨೦೨೫ರ ಲೆಕ್ಕ ಪರಿಶೋಧನೆ ದಿನದ ಸಮಾರಂಭದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಸಿಎಜಿ ಸಂಸ್ಥೆ ನ್ಯಾಯಯುತ ಮತ್ತು ನಿಖರ ಲೆಕ್ಕ ಪರಿಶೋಧನೆಗೆ ತೋರಿರುವ ಬದ್ಧತೆ ಆಡಳಿತ ಸಮಗ್ರತೆಯನ್ನು ಬಲಪಡಿಸುತ್ತದೆ ಎಂದರು

<><><><>

ಕೇಂದ್ರ ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಮತ್ತು ಕತಾರ್ ಪ್ರಧಾನಮಂತ್ರಿ ಹಾಗೂ ವಿದೇಶಾಂಗ ವ್ಯವಹಾರಗಳ ಸಚಿವ ಮೊಹಮ್ಮದ್ ಬಿನ್ ಅಬ್ದುಲ್ ರಹಮಾನ್ ಅಲ್‌ಥಾನಿ ಅವರು, ಪಶ್ಚಿಮ ಏಷ್ಯಾದಲ್ಲಿನ ಬೆಳವಣಿಗೆಗಳು ಹಾಗೂ ಪ್ರಾದೇಶಿಕ ಮತ್ತು ಜಾಗತಿಕ ವಿಷಯಗಳ ಕುರಿತು ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಂಡಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಈ ಕುರಿತು ಮಾಹಿತಿ ಹಂಚಿಕೊಂಡಿರುವ ಸಚಿವ ಡಾ. ಜೈಶಂಕರ್, ದೋಹಾದಲ್ಲಿ ಕತಾರ್ ಪ್ರಧಾನಿಯೊಂದಿಗೆ ಹಾಗೂ ಕತಾರ್‌ನ ಆಮೀರ್ ತಮಿಮ್ ಬಿನ್ ಅಹಮ್ಮದ್ ಅಲ್‌ಥಾನಿ ಅವರೊಂದಿಗೆ ನಡೆಸಿದ ಸಭೆಗಳ ಕುರಿತು

ಸಂತಸ ವ್ಯಕ್ತಪಡಿಸಿದ್ದಾರೆ. ಸಭೆಯಲ್ಲಿ ಇಂಧನ, ವ್ಯಾಪಾರ, ಹೂಡಿಕೆ ಮತ್ತು ಜನರಿಂದ ಜನರ ಸಂಪರ್ಕ ಸೇರಿದಂತೆ ಕಾರ್ಯತಂತ್ರದ ಪಾಲುದಾರಿಕೆಯ ವಿವಿಧ ಅಂಶಗಳ ಬಗ್ಗೆ ಚರ್ಚಿಸಲಾಗಿದೆ. ಕತಾರ್, ಆಮೀರ್ ಅವರೊಂದಿಗೆ ನಡೆಸಿದ ಸಭೆಯಲ್ಲಿ ಭಾರತ ಕತಾರ್ ಸಂಬಂಧಗಳನ್ನು ಬಲಪಡಿಸಲು ಬದ್ಧತೆಯನ್ನು ಪುನರುಚ್ಚರಿಸಲಾಗಿದೆ ಎಂದು ಡಾ. ಜೈಶಂಕರ್ ತಿಳಿಸಿದ್ದಾರೆ.

<><><>

ಜಮ್ಮು-ಕಾಶ್ಮೀರದ ನೌಗಾಮ್ ಪೊಲೀಸ್ ಠಾಣೆಯಲ್ಲಿ ೯ ಜನರ ಸಾವಿಗೆ ಕಾರಣವಾದ ಸ್ಫೋಟದ ಸ್ಥಳಕ್ಕೆ ಎನ್‌ಎಸ್‌ಜಿಯ ವಿಧಿವಿಜ್ಞಾನ ತಜ್ಞರ ತಂಡ ಇಂದು ಭೇಟಿ ನೀಡಿತು. ಸ್ಫೋಟದ ವಿವರವಾದ ಪರಿಶೀಲನೆ ನಡೆಸಲು ತಂಡ ಈಗಾಗಲೇ ಪ್ರದೇಶವನ್ನು ನಿರ್ಬಂಧಿಸಿದೆ. ಕೇಂದ್ರ ವಿಧಿವಿಜ್ಞಾನ ತಂಡ ಮಾದರಿಗಳನ್ನು ಸಂಗ್ರಹಿಸಿ ಸ್ಥಳೀಯ ಎಫ್‌ಎಸ್‌ಎಲ್ ತಂಡ ಮತ್ತು ಪೊಲೀಸ್ ಅಧಿಕಾರಿಗಳೊಂದಿಗೆ ಮಾತುಕತೆ ನಡೆಸಿದೆ.

<><><>

ಪಂಜಾಬ್ ಪೊಲೀಸರು, ಪಾಕಿಸ್ತಾನಕ್ಕೆ ಸಂಬಂಧಿಸಿದ ಶಸ್ತ್ರಾಸ್ತ್ರಗಳು ಮತ್ತು ಮಾದಕ ದ್ರವ್ಯ ಜಾಲವನ್ನು ಭೇದಿಸಿದ್ದು, ೫ ಜನರನ್ನು ಬಂಧಿಸಿದ್ದಾರೆ ಮತ್ತು ಅವರ ಬಳಿ ಇದ್ದ ೬ ಅತ್ಯಾಧುನಿಕ ಪಿಸ್ತೂಲ್, ಸುಮಾರು ೧ ಕೆ.ಜಿ. ಹೇರಾಯಿನ್ ವಶಪಡಿಸಿಕೊಂಡಿದ್ದಾರೆ ಎಂದು ಪಂಜಾಬ್ ಡಿಜಿಪಿ ಗೌರವ್ ಯಾದವ್ ತಿಳಿಸಿದ್ದಾರೆ.

<><><>

ಗ್ರೇಟರ್ ನೋಯ್ಡಾದ ಶಹೀದ್ ವಿಜಯ್ ಸಿಂಗ್ ಪಾಠಿಕ್ ಕ್ರೀಡಾ ಸಂಕಿರಣದಲ್ಲಿ ನಡೆಯುತ್ತಿರುವ ವಿಶ್ವ ಬಾಕ್ಸಿಂಗ್ ಕಪ್ ಫೈನಲ್‌ನ ಮೊದಲ ದಿನದಂದು ಭಾರತ ಗೆಲುವಿನ ಆರಂಭ ಕಂಡಿದೆ. ನಾಲ್ವರು ಭಾರತೀಯ ಬಾಕ್ಸರ್‌ಗಳು ತಮ್ಮ ಕ್ವಾರ್ಟರ್ ಫೈನಲ್ ಪಂದ್ಯಗಳಲ್ಲಿ ಭರ್ಜರಿ ಜಯ ಸಾಧಿಸುವ ಮೂಲಕ ಸೆಮಿಫೈನಲ್‌ಗೆ ಮುನ್ನಡೆದಿದ್ದಾರೆ. ಮಹಿಳಾ ೪೮ ಕೆ.ಜಿ. ಮತ್ತು ೫೮ ಕೆ.ಜಿ. ವಿಭಾಗದಲ್ಲಿ ಮೀನಾಕ್ಷಿ

ಮತ್ತು ಪ್ರೀತಿ ಕ್ರಮವಾಗಿ ಕಜಕಿಸ್ತಾನದ ಬೊಲಾಟ್ ಅಕ್ಬೋಟಾ ಮತ್ತು ಉಜ್ಬೇಕಿಸ್ತಾನದ ಉಕ್ತಮೊವಾ ನಿಜಿನಾ ವಿರುದ್ಧ ಗೆಲುವು ಸಾಧಿಸಿದರು. ಪುರುಷರ ೮೦ ಮತ್ತು ೯೦ ಪ್ಲಸ್ ಕೆ.ಜಿ. ವಿಭಾಗದಲ್ಲಿ ಅಂಕುಶ್ ಮತ್ತು ನರೇಂದರ್ ಕ್ರಮವಾಗಿ ಜಪಾನ್‌ನ ವಕಾಯಗೊ ಮತ್ತು ಉಕ್ರೇನ್‌ನ ಮಾಮಸೊಲಿವ್ ಖಾಲಿಂಗ್‌ಜಾನ್ ವಿರುದ್ಧ ಜಯಗಳಿಸಿದರು.

<><><><>

ಕೊಲಂಬೋದ ಬಿಒಐ ಕ್ರೀಡಾಂಗಣದಲ್ಲಿ ನಡೆದ ಅಂಧರ ಮಹಿಳಾ ವಿಶ್ವಕಪ್ ಟಿ-೨೦ ಪಂದ್ಯದಲ್ಲಿ ಭಾರತ, ಪಾಕಿಸ್ತಾನದ ವಿರುದ್ಧ ೮ ವಿಕೆಟ್‌ಗಳಿಂದ ಜಯಗಳಿಸಿದೆ. ನಿಗದಿತ ೧೩೬ ರನ್‌ಗಳ ಗೆಲುವಿನ ಗುರಿ ಬೆನ್ನತ್ತಿದ ಭಾರತ ೧೦.೨ ಓವರ್‌ಗಳಲ್ಲಿ ೨ ವಿಕೆಟ್ ನಷ್ಟಕ್ಕೆ ೧೩೬ ರನ್‌ಗಳಿಸಿ ಗೆಲುವು ದಾಖಲಿಸಿತು. ಪ್ರಸ್ತುತ ವಿಶ್ವಕಪ್ ಪಂದ್ಯಾವಳಿಯಲ್ಲಿ ಭಾರತ ಈಗಾಗಲೇ ಸೆಮಿಫೈನಲ್ಸ್ ಪ್ರವೇಶಿಸಿದೆ. ಇದೇ ೨೨ರಂದು ಸೆಮಿಫೈನಲ್ ಹಾಗೂ ೨೩ ರಂದು ಫೈನಲ್ ಪಂದ್ಯ ನಡೆಯಲಿದೆ.

<><><>

ಕೋಲ್ಕತ್ತಾದ ಈಡನ್ ಗಾರ್ಡನ್ಸ್‌ನಲ್ಲಿ ನಡೆದ ಎರಡು ಪಂದ್ಯಗಳ ಟೆಸ್ಟ್ ಕ್ರಿಕೆಟ್ ಸರಣಿಯ ಮೊದಲ ಪಂದ್ಯದಲ್ಲಿ ದಕ್ಷಿಣ ಆಫ್ರಿಕಾ ತಂಡ ಆತಿಥೇಯ ಭಾರತವನ್ನು ೩೦ ರನ್‌ಗಳಿಂದ ಸೋಲಿಸಿದೆ. ದಕ್ಷಿಣ ಆಫ್ರಿಕಾ ನೀಡಿದ್ದ ೧೨೪ ರನ್‌ಗಳ ಗುರಿಯನ್ನು ಬೆನ್ನಟ್ಟಿದ ಭಾರತ ತಂಡ, ತನ್ನ ಎರಡನೇ ಇನ್ನಿಂಗ್ಸ್‌ನಲ್ಲಿ ೯೩ ರನ್‌ಗಳಿಗೆ ತನ್ನೆಲ್ಲಾ ವಿಕೆಟ್ ಕಳೆದುಕೊಂಡಿತು.